KACM710003942021

**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

## <u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 265/2021</u>

**<u>ಫಿರ್ಯಾದಿ</u>** ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

**- ವಿರುದ್ಧ -**

**<u>ಆರೋಪಿ/ತರುಃ</u>**

ಹರೀಶ ಬಿನ್ ಚಂದ್ರನಾಯ್ಕ, 25 ವರ್ಷ, ವಾಸ ಃ ಕರಕುಚ್ಚಿ ತಾಂಡ್ಯ ಗ್ರಾಮ, ಲಕ್ಕವಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

**<u>-ಃದೋಷಾರೋಪಣೆಃ-</u>**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 11.04.2020 ರಂದು ಮಧ್ಯಾಹ್ನ 03.20 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿನ ಕರಕುಚ್ಚಿ ಗ್ರಾಮದ ರಾಮ್ ರಾಜ್ ರವರ ಅಡಿಕೆ ತೋಟದ ಬಳಿಯ ಕಚ್ಚಾ ರಸ್ತೆಯಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಿಗೆಯನ್ನು ಪಡೆಯದೇ ಮತ್ತು ಸರ್ಕಾರಕ್ಕೆ ರಾಜಧನವನ್ನು ಪಾವತಿಸದೇ ಕರಕುಚ್ಚಿ ಗ್ರಾಮದ ವಾಸಿಯಾದ ರಾಮಾನಾಯ್ಕರವರ ತೋಟದ ಬಳಿಯ ಭದ್ರಾ ಹೊಳೆಯಿಂದ ಅಕ್ರಮವಾಗಿ ಕಳ್ಳತನದಿಂದ ರೂ.1,750/- ಬೆಲೆ ಬಾಳುವ ಮರಳನ್ನು ತೆಗೆದು ಪಿಕ್ ಅಪ್ ವಾಹನ ಸಂಖ್ಯೆ ಕೆಎಃ18/ಸಿ-4311 ರಲ್ಲಿ ಮಾರಾಟ ಮಾಡುವ

ಉದ್ದೇಶದಿಂದ ಸಾಗಾಣಿಕೆ ಮಾಡುತ್ತಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 379 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 20.06.2022

ಸಹಿ

**(ಶಿವಕುಮಾರ್.ಆರ್)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**